5142 (6101) ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನಬಾಗೇವಾಡಿ): ಮಾನ್ಯ ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಿಜಾಪುರದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ಯೋಚಿಸಿದೆಯೇ;

ಆ) ಹಾಗಾದಲ್ಲಿ, ಗುರುತಿಸಿರುವ ಸ್ಥಳದಲ್ಲಿ ಏನಾದರೂ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ;

ಇ) ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಜೊತೆಗೆ ವ್ಯವಹರಿಸಿದೆಯೇ;

ಈ) ಸರ್ಕಾರವು ಕಳೆದ ಅಧಿವೇಶನದಲ್ಲಿ ವಿಮಾನ ನಿಲ್ದಾಣದ ನಿರ್ಮಾಣ ಕಾರ್ಯವನ್ನು ನಿಖರವಾದ ಕಾಲಮಿತಿಯಲ್ಲಿ ಪೂರ್ಣಗೊಸುವಂತಹ ಹಂತವನ್ನು ಇನ್ನೂ ತಲುಪಲಾಗಿಲ್ಲವೆಂದು ತಿಳಿಸಿದ್ದು, ಈಗ ನಿಖರವಾದ ಕಾಲಮಿತಿ ತಲುಪಿದೆಯೆ?

ಶ್ರೀ ಪಿ. ಜಿ. ಆರ್. ಸಿಂಧ್ಯ (ಮಾನ್ಯ ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು):

ಅ) ಯೋಚಿಸಿದೆ.

ಆ) ಈ ಕೆಳಕಂಡ ಸ್ಥಳಗಳನ್ನು ಗುರುತಿಸಲಾಗಿದೆ;

1) ಬಿಜಾಪುರ ತಾಲ್ಲೂಕಿನ ಅರಕೇರಿ ಗ್ರಾಮದ ಸರ್ಕಾರಿ ಜಮೀನು– 450 ಎಕರೆ.

2) ಆಲಿಯ ಬಾದ್ ಕೈಗಾರಿಕೆ ವಸಾಹತು ಪ್ರದೇಶದ 202 ಎಕರೆ.

3) ಬುರಾನಪುರ ಗ್ರಾಮದ ಸರ್ಕಾರಿ ಜಮೀನು ಒಟ್ಟು 457.01 ಎಕರೆ ಹಾಗೂ 82–32 ಎಕರೆ ಖಾಸಗಿ ಜಮೀನನ್ನು ಗುರ್ತಿಸಲಾಗಿದೆ.

ಈ ವರೆಗೆ ಯಾವ ಜಮೀನನ್ನು ಅಂತಿಮವಾಗಿ ಆಯ್ಕೆಮಾಡಿರುವುದಿಲ್ಲ.

ಇ) ಹೌದು.

ಈ) ಇಲ್ಲ.

3144 (5742) ಶ್ರೀ ಸಿಂಧೂರ ಜಿ. ರಾಜಶೇಖರ್ (ಶಿಗ್ಗಾಂವ್): ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸವಣೂರಿನಲ್ಲಿರುವ ಪಶು ಆಸ್ಪತ್ರೆಯ ಕಟ್ಟಡ ಶಿಥಿಲಗೊಂಡಿದ್ದು, ಕಾಂಪೌಂಡ್ ಗೋಡೆ ಸಹ ಶಿಥಿಲಾವಸ್ಥೆಯಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಶಿಗ್ಗಾಂವ್‌ನಲ್ಲಿರುವ ಪಶು ಆಸ್ಪತ್ರೆಯ ಕಟ್ಟಡ ಹಳೆಯದಾಗಿದ್ದು; ಅದು ಸಹ ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಇ) ಹಾಗಿದ್ದಲ್ಲಿ, ಮೇಲ್ಕಾಣಿಸಿದ ಶಿಗ್ಗಾಂವ–ಸವಣೂರ ಪಶು ಆಸ್ಪತ್ರೆಯ ಕಟ್ಟಡಗಳನ್ನು ನವೀಕರಣಗೊಳಿಸಲಿಕ್ಕೆ ತೀವ್ರ ಗತಿಯಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಈ) ಶಿಗ್ಗಾಂವ–ಸವಣೂರ ತಾಲ್ಲೂಕ್‌ಗಳಲ್ಲಿರುವ ಎಲ್ಲ ಪಶು ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ ತುಂಬಾ ಇದ್ದು, ಹಲವಾರು ಬಾರಿ ಸಂಬಂಧಪಟ್ಟ ಇಲಾಖೆಗೆ ತಿಳಿಸಿದರೂ ಸಹ ಕೊರತೆ ನೀಗುವ ಕ್ರಮ ಕಾರ್ಯರೂಪಕ್ಕೆ ಬರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?